ಕರ್ನಾಟಕ ಸರ್ಕಾರ

ಸಂಖ್ಯೆ: ಲೋಇ 48 ಬಿಎಂಎಸ್ 2022

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 31.05.2024

## ಸುತ್ತೋಲೆ

**ವಿಷಯ:-** ಕೆಟಿಪಿಪಿ ಕಾಯ್ದೆ ಮತ್ತು ನಿಯಮಗಳನ್ವಯ ಗುತ್ತಿಗೆದಾರರನ್ನು ಡಿಬಾರ್ ಮಾಡುವ ಕುರಿತು.

**ಉಲ್ಲೇಖ:-** ಸರ್ಕಾರದ ಸುತ್ತೋಲೆ ಸಂಖ್ಯೆ: ಲೋಇ 48 ಬಿಎಂಎಸ್ 2022, ದಿನಾಂಕ:27.07.2022.

*******

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು 2000ರ ನಿಯಮ 26(ಎ)ರನ್ವಯ ಟೆಂಡರ್‌ದಾರ ಅಥವಾ ಗುತ್ತಿಗೆದಾರ ಅಥವಾ ಸರಬರಾಜುದಾರ ಅಥವಾ ಅವರ ಯಾವುದೇ ಉತ್ತರಾಧಿಕಾರಿಯನ್ನು ಡಿಬಾರ್ ಮಾಡುವ ಕುರಿತು ಸಂಗ್ರಹಣಾ ಸಂಸ್ಥೆಯ ಹಂತದಲ್ಲಿ ಡಿಬಾರ್‌ಮೆಂಟ್ ಸಮಿತಿಯನ್ನು ರಚಿಸುವ ಕುರಿತು ಉಲ್ಲೇಖಿತ ದಿನಾಂಕ:27.07.2022ರ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ. ಹಾಗೂ ಸಂಗ್ರಹಣಾ ಪ್ರಾಧಿಕಾರಗಳು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: FD 884 Exp-12/2019, ದಿನಾಂಕ:07.05.2020 ರಲ್ಲಿ ಹೊರಡಿಸಿರುವ ಕೆಟಿಪಿಪಿ ನಿಯಮ 26A ರನ್ವಯ ಡಿಬಾರ್‌ಮೆಂಟ್ ಸಮಿತಿ ರಚಿಸಲು ಹಾಗೂ ಅದರಲ್ಲಿ ತಿಳಿಸಿರುವ ವಿಧಾನವನ್ನು ಅನುಸರಿಸಲು ಮತ್ತು ಡಿಬಾರ್‌ಮೆಂಟ್ ನಂತರ ನಿಯಮ 26C ರನ್ವಯ ಕ್ರಮವಹಿಸಲು ತಿಳಿಸಲಾಗಿರುತ್ತದೆ.

ಈ ಸಂಬಂಧ ಸಂಗ್ರಹಣಾ ಪ್ರಾಧಿಕಾರಗಳ ಹಂತದಲ್ಲಿ ಗುತ್ತಿಗೆದಾರರನ್ನು ಯಾವ ಸಂದರ್ಭದಲ್ಲಿ ಡಿಬಾರ್ ಮಾಡಬೇಕೆನ್ನುವ ಕುರಿತು ಹೆಚ್ಚಿನ ಸ್ಪಷ್ಟನೆ ಅವಶ್ಯಕತೆ ಇರುವುದನ್ನು ಗಮನಿಸಲಾಗಿದೆ. ಈ ಹಿನ್ನಲೆಯಲ್ಲಿ ಸಂಗ್ರಹಣಾ ಪ್ರಾಧಿಕಾರಗಳು ತಮ್ಮ ಹಂತದಲ್ಲಿ ಕೆಳಕಂಡ ಸಂದರ್ಭಗಳಲ್ಲಿ ಲೋಕೋಪಯೋಗಿ ಇಲಾಖೆಯ ಟೆಂಡರ್‌ಗಳಲ್ಲಿ ಭಾಗವಹಿಸದಂತೆ 3 ವರ್ಷಗಳ ಅವಧಿಗೆ ಗುತ್ತಿಗೆದಾರರನ್ನು ಡಿಬಾರ್ ಮಾಡುವ ಕುರಿತು ನಿಯಮಾನುಸಾರ ಕ್ರಮ ವಹಿಸತಕ್ಕದ್ದು.

1. The contractor has executed bad quality work.
2. The Contractor has failed to complete the work within the stipulated period of time.
3. The contractor is a habitual litigant.
4. The contractor continuously refuses to pay Government dues without showing adequate reasons.
5. The Contractor or his partner or his representative has been convicted by a court of law for offences involving moral turpitude in relation to the business dealings;
6. The contractor either by himself or through his agents or his association with others conducts himself in a manner which in the opinion of the procurement entity is liable to impede or affect prejudicially the progress of any Government work, or is guilty of misconduct in connection with the execution of Government work.
7. Misleading the procurement entity at any stage of procurement Activity with a fraudulent intention.

Scanned by CamScanner

ಮೇಲ್ಕಂಡ ಸಂದರ್ಭಗಳು ಪುನರಾವರ್ತನೆಗೊಂಡು ಸಂಗ್ರಹಣಾ ಪ್ರಾಧಿಕಾರಗಳು ರಾಜ್ಯ ಮಟ್ಟದಲ್ಲಿ ಡಿಬಾರ್ ಮಾಡಬೇಕೆನ್ನುವ ಅಭಿಪ್ರಾಯವನ್ನು ಹೊಂದಿದಲ್ಲಿ ಹಾಗೂ "There are sufficient and strong reasons that the contractor or his employee has been guilty of criminal offences, corruption, integrity, honesty, submission of fraudulent solvency certificates or bank guarantees, etc." ಸಂದರ್ಭದಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: FD/54/Exp-12/2022 dtd:29.01.2022 ರಲ್ಲಿ ರಚಿಸಲಾಗಿರುವ ರಾಜ್ಯ ಮಟ್ಟದ ಡಿಬಾರ್‌ಮೆಂಟ್ ಸಮಿತಿಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.

Vijaykumar K.C 31/5/24

**(ವಿಜಯಕುಮಾರ ಕೆ.ಸಿ)**
ಸರ್ಕಾರದ ಉಪ ಕಾರ್ಯದರ್ಶಿ,
ಲೋಕೋಪಯೋಗಿ ಇಲಾಖೆ (ಸಂ&ಕ).

31/5/24

**ಇವರಿಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ, 3ನೇ ಮಹಡಿ, ಸಂಪರ್ಕ ಸೌಧ, ಓರಿಯನ್ ಮಹಲ್ ಎದುರು, ರಾಜಾಜಿನಗರ, ಬೆಂಗಳೂರು
2. ಯೋಜನಾ ನಿರ್ದೇಶಕರು, ಯೋಜನಾ ಅನುಷ್ಠಾನ ಘಟಕ, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ, ಕೆ.ಆರ್.ಸರ್ಕಲ್, ಬೆಂಗಳೂರು.
3. ಮುಖ್ಯ ಯೋಜನಾಧಿಕಾರಿ, ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ, ಕೆ.ಆರ್.ಸರ್ಕಲ್, ಬೆಂಗಳೂರು
4. ಮುಖ್ಯ ಇಂಜಿನಿಯರ್, ಯೋಜನೆ ಮತ್ತು ರಸ್ತೆಗಳ ಆಸ್ತಿ ನಿರ್ವಹಣಾ ಕೇಂದ್ರ, ಕೆ.ಆರ್. ವೃತ್ತ, ಬೆಂಗಳೂರು
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಉತ್ತರ), ಧಾರವಾಡ
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಈಶಾನ್ಯ), ಕಲಬುರಗಿ
8. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಕೇಂದ್ರ), ಶಿವಮೊಗ್ಗ
9. ಮುಖ್ಯ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ, ಕೆ.ಆರ್.ಸರ್ಕಲ್, ಬೆಂಗಳೂರು
10. ಎಲ್ಲಾ ಅಧೀಕ್ಷಕ ಇಂಜಿನಿಯರ್ ಗಳಿಗೆ ಸಂಬಂಧಿಸಿದ ಮುಖ್ಯ ಇಂಜಿನಿಯರ್ ಗಳ ಮುಖಾಂತರ
11. ಎಲ್ಲಾ ಕಾರ್ಯಪಾಲಕ ಇಂಜಿನಿಯರ್ ಗಳಿಗೆ ಸಂಬಂಧಿಸಿದ ಅಧೀಕ್ಷಕ ಇಂಜಿನಿಯರ್ ಗಳ ಮುಖಾಂತರ

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ.
2. ಸರ್ಕಾರದ ಅಪರ / ಉಪ ಕಾರ್ಯದರ್ಶಿಯವರ (ಸಂ&ಕ) ಆಪ್ತ ಸಹಾಯಕರು, ಲೋಕೋಪಯೋಗಿ ಇಲಾಖೆ.

Scanned by CamScanner